ವಿಜಯವಾಣಿ
ಕನ್ನಡಿಗರ ಧ್ವನಿ

# ಸಿಎಂಎಸ್ ಜೈನ್ ಕಾಲೇಜಿನಲ್ಲಿ ಸಾಂಸ್ಕೃತಿಕ ರಂಗು

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸಿಎಂಎಸ್ ಜೈನ್ ಕಾಲೇಜಿನ ಮ್ಯಾನೇಜ್‌ಮೆಂಟ್ ಸ್ಟಡೀಸ್ ಸೆಂಟರ್ ವಿಭಾಗ, ವಿಜಯವಾಣಿ ಮತ್ತು ದಿಗ್ವಿಜಯ 24X7 ನ್ಯೂಸ್ ಸುದ್ದಿವಾಹಿನಿ ಸಹಯೋಗದೊಂದಿಗೆ ಆಯೋಜಿಸಿರುವ ಅಂತರ ಕಾಲೇಜು ಸ್ಪರ್ಧೆಗಳ ಪೈಕಿ ಶುಕ್ರವಾರ ಸಾಂಸ್ಕೃತಿಕ ಸ್ಪರ್ಧೆ ನಡೆಯಿತು.

ವಿಜಯವಾಣಿ
ದಿಗ್ವಿಜಯ 24X7 NEWS
ಮಾಧ್ಯಮ ಸಹಯೋಗ

» ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ

ಜೆ.ಪಿ. ನಗರದಲ್ಲಿರುವ ಎಂಎಲ್ ಆರ್ ಕನ್ವೆನ್ಷನ್ ಸೆಂಟರ್‌ನಲ್ಲಿ ಸ್ಪರ್ಧೆ ಆಯೋಜಿಸಲಾಗಿತ್ತು. ಬೆಳಗ್ಗೆ ನಡೆದ ತ್ರೆಶೋಲ್ಡ್ ಸ್ಪರ್ಧೆಯ ಸಮಾರೋಪ ಸಮಾರಂಭದ ಮುಖ್ಯ ಅತಿಥಿಯಾಗಿ ಡಿಸ್ಕವರಿ ಚಾನೆಲ್ ಸಾಕ್ಷ್ಯಚಿತ್ರ ನಿರ್ದೇಶಕ ಪಾಲ್ ರಸೋಲಿ ಭಾಗವಹಿಸಿ ವಿಜೇತ ತಂಡಕ್ಕೆ ಪ್ರಶಸ್ತಿಗಳನ್ನು ನೀಡಿದರು.



ವಿಜಯವಾಣಿ ಚಿತ್ರಗಳು

ವಿವಿಧ ರಾಜ್ಯಗಳಿಂದ ಆಗಮಿಸಿದ ಕಾಲೇಜು ವಿದ್ಯಾರ್ಥಿಗಳ ತಂಡಗಳು ಪಾಶ್ಚಾತ್ಯ ನೃತ್ಯ, ಸಾಂಪ್ರದಾಯಿಕ ನೃತ್ಯ, ಮ್ಯಾಡ್ ಆ್ಯಡ್‌ಗಳನ್ನು ಪ್ರಸ್ತುತಪಡಿಸಿದವು. ವಿವಿಧ ಕಾಲೇಜಿನಿಂದ ಆಗಮಿಸಿದ್ದ ವಿದ್ಯಾರ್ಥಿಗಳು ತಮ್ಮ ನೃತ್ಯ ತಂಡ ವೇದಿಕೆಗೆ ಆಗಮಿಸುತ್ತಿದ್ದಂತೆಯೇ ಚಪ್ಪಾಳೆ ಹೊಡೆಯುವ ಮೂಲಕ ಪ್ರೋತ್ಸಾಹಿಸಿದರು.

ಸಮಕಾಲೀನ ನೃತ್ಯ ಸಂಯೋಜಕ ಹಲವಾರು ವಾಹಿನಿಗಳಲ್ಲಿ ನೃತ್ಯ ಪ್ರದರ್ಶನ ಮಾಡಿ ಪ್ರಶಸ್ತಿ ಗಳಿಸಿರುವ ಕುನ್ವರ್ ಅಮರ್ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ರಾತ್ರಿ 7ಕ್ಕೆ ರಾಹುಲ್ ಸುಬ್ರಹ್ಮಣ್ಯನ್ ಸ್ಟ್ಯಾಂಡ್‌ಅಪ್ ಕಾಮಿಡಿ ಶೋ ನಡೆಸಿಕೊಟ್ಟರು. ಕಾರ್ಯಕ್ರಮದ ಕೊನೆಯ ದಿನವಾದ ಶನಿವಾರ (ಜ.19) ಫೈನಾಪಲ್ ಎಕ್ಸ್‌ಪ್ರೆಸ್ ಕಾರ್ಯಕ್ರಮ ನಡೆಯಲಿದೆ.



ಸಿಎಂಎಸ್ ಜೈನ್ ಕಾಲೇಜು ಆಯೋಜಿಸಿದ್ದ ಅಂತರ ಕಾಲೇಜು ಸ್ಪರ್ಧೆಗಳಲ್ಲಿ ವಿವಿಧ ರಾಜ್ಯಗಳ ಕಾಲೇಜು ವಿದ್ಯಾರ್ಥಿಗಳ ತಂಡಗಳು ಪಾಶ್ಚಾತ್ಯ, ಸಾಂಪ್ರದಾಯಿಕ ನೃತ್ಯ ಪ್ರಸ್ತುತಪಡಿಸಿದವು.

